ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

## ಪ್ರಾರಂಭಿಕ ಪ್ರಮಾಣ ಪತ್ರ

(ನಮೂನೆ-3)

ಸಂಖ್ಯೆ: ಆಯೋಪ್ರಾ/ಎಲ್ಎಪಿ/52/2019-20 ದಿನಾಂಕ: 10 AUG 2020

ವಿಷಯ:ಬೆಂಗಳೂರುನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಕಸಬಾ ಹೋಬಳಿ, ಲಿಂಗಾಪುರ ಗ್ರಾಮದ ಸ.ನಂ.112ರಲ್ಲಿನ 05ಎಕರೆ ಜಮೀನಿಗೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ(Group Housing Development Plan) ಅನುಮೋದನೆ ನೀಡುವ ಸಂಬಂಧ.

ಉಲ್ಲೇಖ: 1. ಮುಖ್ಯ ಅಭಿಯಂತರರು, ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ಇವರ ಅರ್ಜಿ ದಿನಾಂಕ:04.12.2019.

2. ದಿನಾಂಕ:07.02.2020ರಂದು ನಡೆದ ಪ್ರಾಧಿಕಾರದ 70ನೇ ಸಭೆಯ ವಿಷಯ ಸಂಖ್ಯೆ:62ರ ತೀರ್ಮಾನ.
3. ಆನೇಕಲ್ ಯೋಜನಾ ಪ್ರಾಧಿಕಾರಕ್ಕೆ ಹಣ ಪಾವತಿಸಿದ ಬಗ್ಗೆ ದಿನಾಂಕ:23.06.2020 ಡಿ.ಡಿ.ನಂ.008132 ರೂ.6,200/- ಹಾಗೂ ಕೆರೆಗಳಲ್ಲಿ ನೀರು ಸಂರಕ್ಷಣೆ ಸಂಬಂಧ ಡಿ.ಡಿ.ನಂ.008133 ರೂ.5,06,000/- (ರಶೀತಿ ಸಂಖ್ಯೆ:4113112, 3753527 ದಿನಾಂಕ: 29.06.2020 ಮತ್ತು 10.07.2020)
4. ಪರಿತ್ಯಾಜನ ಪತ್ರದ ನೋಂದಾಯಿತ ದಿನಾಂಕ:27.07.2020.

*********

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರಂತೆ, ಆನೇಕಲ್ ತಾಲ್ಲೂಕು, ಕಸಬಾ ಹೋಬಳಿ, ಲಿಂಗಾಪುರ ಗ್ರಾಮದ ಸ.ನಂ.112ರಲ್ಲಿನ 05ಎಕರೆ ಪ್ರದೇಶಕ್ಕೆ ವಸತಿ ಸಮುಚ್ಚಯ ನಕ್ಷೆ ಅನುಮೋದನೆ ಕೋರಿ ಸಲ್ಲಿಸಿದ ಪ್ರಸ್ತಾವನೆಯನ್ನು ಉಲ್ಲೇಖ(2)ರಂತೆ ನಡೆದ ಆನೇಕಲ್ ಯೋಜನಾ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಲಾಗಿ, ಸಭೆಯಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದಿಸಲು ತೀರ್ಮಾನಿಸಲಾಗಿರುತ್ತದೆ. ಉಲ್ಲೇಖ(3)ರಂತೆ ಸಂಬಂಧಿತ ಶುಲ್ಕವನ್ನು ಆನೇಕಲ್ ಯೋಜನಾ ಪ್ರಾಧಿಕಾರಕ್ಕೆ ಪಾವತಿಸಲಾಗಿದೆ. ಉಲ್ಲೇಖ(4)ರಂತೆ ಉದ್ಯಾನವನಕ್ಕಾಗಿ ಕಾಯ್ದಿರಿಸಲಾದ ಪ್ರದೇಶವನ್ನು ಪ್ರಾಧಿಕಾರಕ್ಕೆ ಪರಿತ್ಯಜನಾ ಪತ್ರದ ಮೂಲಕ ಹಸ್ತಾಂತರಿಸಲಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ:UDD 10 TTP 2018 ದಿನಾಂಕ:04.05.2020ರಲ್ಲಿ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ವಸತಿ ಅವಾಸ್ ಯೋಜನೆಯಡಿಯಲ್ಲಿ ಆರ್ಥಿಕವಾಗಿ ಹಿಂದುಳಿದ ವರ್ಗದವರಿಗಾಗಿ ಬಹುಮಹಡಿ ವಸತಿ ನಿರ್ಮಾಣ ಯೋಜನೆ ಸಂಬಂಧ ವಲಯನಿಯಮಾವಳಿಗಳಿಗೆ ತಿದ್ದುಪಡಿ ಮಾಡಲಾಗಿದ್ದು, ಅದರಂತೆ, ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಪರಿಶೀಲಿಸಲಾಗಿರುತ್ತದೆ. ಹಾಗೂ ಸರ್ಕಾರದ ಪತ್ರ ಸಂಖ್ಯೆ:70 ಬೆಮಪ್ರಾ 2020(ಇ) ದಿನಾಂಕ:02.06.2020ರಲ್ಲಿ ರಾಜೀವ್ ಗಾಂಧಿ ವಸತಿ ನಿಗಮದಿಂದ "1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ" ಯಡಿಯಲ್ಲಿ ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ನಿರ್ಮಿಸಲಾಗುವ ವಸತಿ ಯೋಜನೆಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ 18-ಎ ರಡಿ ವಿಧಿಸುವ ಕರ/ಉಪ ಕರಗಳಿಗೆ ಅದೇ ಕಾಯ್ದೆಯ ಕಲಂ18-ಎ(5)ರಡಿಯಲ್ಲಿ ಕಲ್ಪಿಸಿರುವ ಅವಕಾಶದಂತೆ, ವಿನಾಯಿತಿ ನೀಡಲು ಅನುಮೋದನೆ ನೀಡಲಾಗಿರುತ್ತದೆ. ಹಾಗಾಗಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ ಕಲಂ 17ರಡಿಯಲ್ಲಿ **ಮುಖ್ಯ ಅಭಿಯಂತರರು, ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ,** ಇವರಿಗೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ (Group Housing Development Plan) ಈ ಕೆಳಕಂಡ ನಿಬಂಧನೆಗಳೊಡನೆ ನಕ್ಷೆಯನ್ನು ಅನುಮೋದಿಸಲಾಗಿದೆ.

1) ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 30.01.2020ರಂದು ನಡೆದ ಸಭೆಯಲ್ಲಿ ಅಜಂಡ 2ರಲ್ಲಿನ (3)ರ ನಿರ್ಣಯದಂತೆ, ಕ್ರಮವಹಿಸಲಾಗಿದೆ. ಆದರೆ, ಕಟ್ಟಡ ಪೂರ್ಣಗೊಂಡ ಪ್ರಮಾಣ ಪತ್ರ ಪಡೆಯುವ ಮುನ್ನ ಸಕ್ಷಮ ಪ್ರಾಧಿಕಾರಗಳ ನಿರಾಕ್ಷೇಪಣಾ ಪತ್ರಗಳನ್ನು ಕಡ್ಡಾಯವಾಗಿ ಪಡೆಯುವುದು.

ಮು.ತಿ.ನೋ.

2) ಮೇಲ್ಕಂಡ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಪ್ರದೇಶದಲ್ಲಿ ಕಟ್ಟಡ ಕಟ್ಟುವ ಮುನ್ನ ನಕ್ಷೆಯನ್ನು ಈ ಕಛೇರಿಯಿಂದ ನಿಯಮಗಳ ಪ್ರಕಾರ ಅನುಮೋದನೆ ಪಡೆದು ನಂತರ ಹಾರಗದ್ದೆ ಗ್ರಾಮಪಂಚಾಯ್ತಿ ಯಿಂದ ಕಟ್ಟಡ ಪರವಾನಿಗೆ ಪಡೆದು ನಂತರ ಕಟ್ಟಡದ ಕೆಲಸವನ್ನು ಪ್ರಾರಂಭಿಸುವುದು.

3) **ಕಾರ್ಮಿಕರ ಕಲ್ಯಾಣ ನಿಧಿಗೆ ಪಾವತಿಸಬೇಕಾದ ಶುಲ್ಕವನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಿಂದ ಪರವಾನಿಗೆ ಪಡೆಯುವ ಸಮಯದಲ್ಲಿ ಕಡ್ಡಾಯವಾಗಿ ಪಾವತಿಸತಕ್ಕದ್ದು.** ಹಾಗೂ ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ನಿಯೋಜಿಸಿಕೊಳ್ಳತಕ್ಕದಲ್ಲ.

4) ಈಗ ನೀಡಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ ಎರಡು ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ಕಟ್ಟಡ ಕಟ್ಟಲು ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯುವುದು. ಒಂದು ವೇಳೆ ನಿಗದಿತ ಅವಧಿಯಲ್ಲಿ ಕಟ್ಟಡ ಕಟ್ಟಲು ಸಾಧ್ಯವಾಗದಿದ್ದಲ್ಲಿ ಅನುಮತಿಯನ್ನು ಕಾಲಮಿತಿಯೊಳಗೆ ಸೂಕ್ತ ಕಾರಣಗಳನ್ನು ಸಲ್ಲಿಸಿ ನವೀಕರಿಸಿಕೊಳ್ಳತಕ್ಕದ್ದು.

5) ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಪ್ರದೇಶವನ್ನು ಈ ಪ್ರಾಧಿಕಾರದ ಅನುಮೋದನೆ ನೀಡಿದ 24 ತಿಂಗಳ ಒಳಗಾಗಿ ಸಂಪೂರ್ಣವಾಗಿ ಅಂದರೆ ಉದ್ಯಾನವನ, ರಸ್ತೆಗಳು, ಒಳಚರಂಡಿ ವ್ಯವಸ್ಥೆ, ನೀರಿನ ಸೌಕರ್ಯ, ವಿದ್ಯುತ್ ಸಂಪರ್ಕ ಅಭಿವೃದ್ಧಿಪಡಿಸತಕ್ಕದ್ದು.

6) ಪ್ರಸ್ತಾವಿತ ಕಟ್ಟಡದಲ್ಲಿ ಸೂಕ್ತವಾದ ಕಡೆ ಪ್ರಮಾಣೀಕೃತ ರೀತಿಯಲ್ಲಿ ಸೀವೇರ್ಜ್ ಟ್ರೀಟ್‌ಮೆಂಟ್ ಪ್ಲಾಂಟ್‌ಅನ್ನು ಸ್ಥಾಪಿಸಬೇಕು ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನಿಯಮಗಳಿಗೆ ಒಳಪಟ್ಟಿರಬೇಕು ಹಾಗೂ ಕಟ್ಟಡದ ಪ್ರಾರಂಭಿಕ ಪ್ರಮಾಣ ಪತ್ರವನ್ನು ಪ್ರಾಧಿಕಾರದಿಂದ ಪಡೆಯುವ ಮುನ್ನ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವರಿಂದ ಅವಶ್ಯವಾಗಿ ನಿರಾಕ್ಷೇಪಣಾ ಪತ್ರ ಪಡೆಯತಕ್ಕದ್ದು.

7) ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಕಾರ್ಯಗತಗೊಳಿಸುವ ಮೊದಲು ಹಾರಗದ್ದೆ ಗ್ರಾಮಪಂಚಾಯ್ತಿ ರವರಿಗೆ ಅಭಿವೃದ್ಧಿ ಶುಲ್ಕವನ್ನು ಪಾವತಿಸಿ ಖಾತಾ ಪ್ರಮಾಣ ಪತ್ರ ಪಡೆಯತಕ್ಕದ್ದು.

8) ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೇ ವಸತಿ ಅಭಿವೃದ್ಧಿ ನಕ್ಷೆಗೆ ಯಾವುದೇ ಬದಲಾವಣೆಯನ್ನು ಮಾಡಬಾರದು.

9) ನಿವೇಶನದ ಆವರಣದೊಳಗೆ ಮಳೆಯ ನೀರನ್ನು ಸಂರಕ್ಷಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

10) ಅನುಮೋದಿತ ವಸತಿ ಅಭಿವೃದ್ಧಿ ನಕ್ಷೆಯಲ್ಲಿನ ರಸ್ತೆಗಳು, ಉದ್ಯಾನವನವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು.

11) ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿರುವ ಪ್ರದೇಶದಲ್ಲಿ ಕಟ್ಟಡ ನಿರ್ಮಿಸುವ ಮೊದಲು ಈ ಪ್ರಾಧಿಕಾರದಿಂದ ಅನುಮೋದನೆ ಪಡೆದು ನಂತರ ಪ್ರಾಧಿಕಾರದ ತೀರ್ಮಾನದಂತೆ, ನಿರ್ವಹಿಸತಕ್ಕದ್ದು.

12) ಈ ಅನುಮೋದನೆಯು ತಾಂತ್ರಿಕವಾಗಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸಲು ಬರುವುದಿಲ್ಲ.

13) ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ಸಮೂಹ ವಸತಿ ನಕ್ಷೆಗೆ ನೀಡಿರುವ ಅಂಗೀಕಾರ ತಂತಾನೆ ರದ್ದುಗೊಳ್ಳುತ್ತದೆ.

14) ಈ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಬರುವ ಕಟ್ಟಡಗಳ ಮಾರಾಟ ಸಂಬಂಧ ನೀಡುವ ವಿಚಾರದಲ್ಲಿ ಪ್ರಾಧಿಕಾರದಿಂದ ಅನುಮೋದನೆಯಾಗಿರುವ ಅನುಮೋದನೆ ಸಂಖ್ಯೆ ಮತ್ತು ದಿನಾಂಕವನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

15) ರಸ್ತೆ ಬದಿಯಲ್ಲಿ ಪಾದಚಾರಿಗಳು ಓಡಾಡಲು ಅನುಕೂಲವಾಗುವಂತೆ ಸೂಕ್ತವಾಗಿ ಪಾದಚಾರಿ ಮಾರ್ಗವನ್ನು (paved foot path) ನಿರ್ಮಿಸುವುದು.

ಪು.ತಿ.ನೋ.

ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

16) ಅನುಮೋದಿತ ವಸತಿ ಅಭಿವೃದ್ಧಿ ನಕ್ಷೆಗೆ ಮಳೆ ನೀರು ಕೊಯ್ಲು ಪದ್ಧತಿಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ವಿನ್ಯಾಸದಲ್ಲಿ ಅಂತರ್ ಜಲ ಅಭಿವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
17) ಪ್ರಸ್ತಾಪಿತ ಪ್ರದೇಶದಲ್ಲಿ ಸೂಕ್ತವಾದ ಕಡೆ ಘನತ್ಯಾಜ್ಯ ನಿರ್ವಹಣೆಗಾಗಿ ಜಾಗವನ್ನು ಕಾಯ್ದಿರಿಸತಕ್ಕದ್ದು.
18) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯವರು ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಎಲ್ಲಾ ಷರತ್ತುಗಳನ್ನು ಪಾಲಿಸತಕ್ಕದ್ದು.
19) ವಸತಿ ಸಮುಚ್ಚಯ ಯೋಜನಾ ಪ್ರದೇಶದಲ್ಲಿ ರಸ್ತೆಗಳ ಬದಿಯಲ್ಲಿ ಗಿಡಮರಗಳನ್ನು ನೆಡತಕ್ಕದ್ದು.
20) ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ವಿಧಿ 15(4)ರಂತೆ ಕ್ರಮಕೈಗೊಳ್ಳಲು ಪ್ರಾಧಿಕಾರಕ್ಕೆ ಅಧಿಕಾರ ಇರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.
21) ಪ್ರಸ್ತಾವಿತ ಪ್ರದೇಶದಲ್ಲಿ ವಿಕಲಚೇತನರಿಗೆ ಅನುಕೂಲವಾಗುವಂತೆ ರಸ್ತೆಯನ್ನು ಕಡ್ಡಾಯವಾಗಿ ಅಭಿವೃದ್ಧಿಪಡಿಸತಕ್ಕದು.
22) ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಈ ಕೆಳಗಿನ ಮತ್ತು ಇತರೆ ಯಾವುದೇ ಪ್ರಾಧಿಕಾರವು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯೂ ಕೂಡಲೇ ರದ್ದಾಗುವುದು. ಹಾಗೂ ಈ ನಿವೇಶನದ ಬಗ್ಗೆ ಏನಾದರೂ ಸಿವಿಲ್ ವ್ಯಾಜ್ಯಗಳು ಉದ್ಭವಿಸಿದಲ್ಲಿ ನ್ಯಾಯಾಲಯದ ತೀರ್ಮಾನಕ್ಕೆ ನೀವು ಬದ್ಧರಾಗಿರತಕ್ಕದ್ದು.

10/8/2022

ಸದಸ್ಯ-ಕಾರ್ಯದರ್ಶಿ ಹಾಗೂ ನಗರ ಮತ್ತು
ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

ಇವರಿಗೆ,
**ಮುಖ್ಯ ಅಭಿಯಂತರರು, ರಾಜೀವ್ ಗಾಂಧಿ
ವಸತಿ ನಿಗಮ ನಿಯಮಿತ,**
# ಕಾವೇರಿ ಭವನ, 9ನೇ ಮಹಡಿ,
ಇ ಮತ್ತು ಎಫ್ ಬ್ಲಾಕ್, ಕೆಂಪೇಗೌಡ ರಸ್ತೆ,
ಬೆಂಗಳೂರು-560 009.